Akashvani: Bangalore
National Bulletin In Kannada
14.03.2026: 7.35AM

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

14.03.2026: 7.35AM

********

**ಮುಖ್ಯಾಂಶಗಳು :**

1. ಅಸ್ಸಾಂನಲ್ಲಿಂದು ೨೩ ಸಾವಿರದ ೫೫೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಲಿರುವ ಪ್ರಧಾನಿ ನರೇಂದ್ರ ಮೋದಿ
2. ಕಂದಾಯ ಸೇವಾ ಅಧಿಕಾರಿಗಳು ದೇಶದ ಆರ್ಥಿಕ ವಲಯದ ಕಾವಲುಗಾರರು - ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಬಣ್ಣನೆ
3. ಕರ್ನಾಟಕದ ಮಂಡ್ಯದಲ್ಲಿಂದು ೧೪ ಕೋಟಿ ರೂಪಾಯಿ ವೆಚ್ಚದ ನೂತನ ಕ್ರೀಡಾಂಗಣ ಕಾಮಗಾರಿಗೆ ಕೇಂದ್ರ ಸಚಿವ ಮನ್ಸುಖ್ ಮಾಂಡವೀಯ ಚಾಲನೆ
4. ಭಾರತದ ೯೪ನೇ ಗ್ರ್ಯಾಂಡ್‌ಮಾಸ್ಟರ್ ಆಗಿ ಹೊರಹೊಮ್ಮಿದ ೧೬ ವರ್ಷದ ಮಯಾಂಕ್ ಚಕ್ರವರ್ತಿ
5. ಎಫ್‌ಐಎಚ್ ಮಹಿಳಾ ಹಾಕಿ ವಿಶ್ವಕಪ್ ಅರ್ಹತಾ ಪಂದ್ಯಾವಳಿ; ಇಟಲಿ ವಿರುದ್ಧ ಗೆದ್ದು ಫೈನಲ್ ಪ್ರವೇಶಿಸಿದ ಭಾರತ

************

ಪ್ರಧಾನಿ ನರೇಂದ್ರ ಮೋದಿ ಇಂದು ಅಸ್ಸಾಂನ ಸಿಲ್ಚಾರ್‌ಗೆ ಭೇಟಿ ನೀಡಿ ೨೩ ಸಾವಿರದ ೫೫೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಪ್ರಧಾನಮಂತ್ರಿಯವರು ಇಂದು ಸಿಲ್ಚಾರ್‌ನ ಅಂಬಿಕಾಪುರದಲ್ಲಿ ಮೂರು ಯೋಜನೆಗಳಿಗೆ 'ಭೂಮಿ ಪೂಜೆ' ನೆರವೇರಿಸಲಿದ್ದಾರೆ. ಇವುಗಳಲ್ಲಿ, ೨೨ ಸಾವಿರದ ೮೬೪ ಕೋಟಿ ರೂಪಾಯಿಗಳ ಅಂದಾಜು ವೆಚ್ಚದ ಸಿಲ್ಚಾರ್ ಹೈ-ಸ್ಪೀಡ್ ಕಾರಿಡಾರ್, ಸುಮಾರು ೫೬೫ ಕೋಟಿ ರೂಪಾಯಿಗಳ ಅಂದಾಜು ವೆಚ್ಚದ ಸಿಲ್ಚಾರ್ ಟೌನ್ ಮೇಲ್ಸೇತುವೆ ಮತ್ತು ೧೨೨ ಕೋಟಿ ರೂಪಾಯಿಗಳ ಅಂದಾಜು ವೆಚ್ಚದ ಪಥರ್‌ಕಂಡಿ ಕೃಷಿ ಕಾಲೇಜು ಯೋಜನೆ ಸೇರಿವೆ. ಅಸ್ಸಾಂ ಭೇಟಿಯ ಮೊದಲ ದಿನವಾದ ನಿನ್ನೆ ಪ್ರಧಾನಿ, ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರವು ರೈತರ ಕಲ್ಯಾಣಕ್ಕೆ ಸಮರ್ಪಿತವಾಗಿದೆ, ಅವರ ಆದಾಯವನ್ನು ಹೆಚ್ಚಿಸಲು ಮತ್ತು ದೇಶದ ಕೃಷಿ ಕ್ಷೇತ್ರಗಳನ್ನು ಆಧುನೀಕರಿಸಲು ಆದ್ಯತೆ ನೀಡುತ್ತದೆ ಎಂದು ಪುನರುಚ್ಚರಿಸಿದರು. ದೇಶಾದ್ಯಂತ ೯.೩೨ ಕೋಟಿಗೂ ಹೆಚ್ಚು ರೈತರಿಗೆ ಪಿಎಂ-ಕಿಸಾನ್ ಯೋಜನೆಯ ೨೨ ನೇ ಕಂತನ್ನು ಬಿಡುಗಡೆ ಮಾಡಿದ ನಂತರ ಗುವಾಹಟಿಯಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಕಳೆದ ೧೧ ವರ್ಷಗಳಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರವು ರೈತರ ಆದಾಯವನ್ನು ಹೆಚ್ಚಿಸಲು ಹಲವು ಕ್ರಮಗಳನ್ನು ತೆಗೆದುಕೊಂಡಿದೆ ಎಂದು ಹೇಳಿದರು. ಎನ್‌ಡಿಎ ಸರ್ಕಾರದ ಅಡಿಯಲ್ಲಿ, ಅಸ್ಸಾಂ ಇತರ ಈಶಾನ್ಯ ರಾಜ್ಯಗಳಿಗೆ ಮಾದರಿಯಾಗಿದೆ ಎಂದರು. ಇದೇ ಸಂದರ್ಭದಲ್ಲಿ ಪ್ರಧಾನಿ ಸುಮಾರು ೧೯ ಸಾವಿರದ ೬೮೦ ಕೋಟಿ ರೂಪಾಯಿಗಳ ಹಲವು ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸುವ ಜೊತೆಗೆ ರಾಷ್ಟ್ರಕ್ಕೆ ಸಮರ್ಪಿಸಿದರು. ಆಯಿಲ್ ಇಂಡಿಯಾ ಲಿಮಿಟೆಡ್‌ನ ನುಮಲಿಗಢ-ಸಿಲಿಗುರಿ ಉತ್ಪನ್ನ ಪೈಪ್‌ಲೈನ್‌ನ ಸಾಮರ್ಥ್ಯ ವರ್ಧನೆ ಯೋಜನೆಯನ್ನು ಅವರು ರಾಷ್ಟ್ರಕ್ಕೆ ಸಮರ್ಪಿಸಿದರು.

************

ಪ್ರಧಾನಿ ನರೇಂದ್ರ ಮೋದಿ ಇಂದು ಕೋಲ್ಕತ್ತಾಗೂ ಭೇಟಿ ನೀಡಲಿದ್ದು, ಸುಮಾರು ೧೮ ಸಾವಿರದ ೬೮೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ, ಶಂಕುಸ್ಥಾಪನೆ ನೆರವೇರಿಸಿ, ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ. ಈ ಪ್ರದೇಶದ ರಸ್ತೆ, ಮೂಲಸೌಕರ್ಯಕ್ಕೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಸುಮಾರು ೧೬ ಸಾವಿರದ ೯೯೦ ಕೋಟಿ ರೂಪಾಯಿ ವೆಚ್ಚದ ಒಟ್ಟು ೪೨೦ ಕಿಲೋಮೀಟರ್ ಉದ್ದದ ಹಲವು ರಾಷ್ಟ್ರೀಯ ಹೆದ್ದಾರಿ ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ತಮ್ಮ ಭೇಟಿಯ ವೇಳೆ ಪ್ರಧಾನಿ, ಹಡಗು ಸಾಗಾಣೆ ಮತ್ತು ಬಂದರು ಸಂಬಂಧಿತ ಯೋಜನೆಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ರೈಲ್ವೆ ವಲಯದಲ್ಲಿ ಪ್ರಧಾನಿ ಪುರುಲಿಯಾ-ಆನಂದ್‌ವಿಹಾರ್ ಟರ್ಮಿನಲ್-ದೆಹಲಿ ಎಕ್ಸ್‌ಪ್ರೆಸ್ ರೈಲಿಗೆ ಹಸಿರು ನಿಶಾನೆ ತೋರಲಿದ್ದು, ಇದರಿಂದ

ಪಶ್ಚಿಮಬಂಗಾಳ, ಉತ್ತರಪ್ರದೇಶ, ಬಿಹಾರ, ಜಾರ್ಖಂಡ್ ಮತ್ತು ರಾಷ್ಟ್ರ ರಾಜಧಾನಿ ನಡುವೆ ರೈಲು ಸಂಪರ್ಕ ಬಲಗೊಳ್ಳಲಿದೆ. ಇದೇ ವೇಳೆ ಪ್ರಧಾನಿ ಅಮೃತ್ ನಿಲ್ದಾಣ್ ಯೋಜನೆಯಡಿ ಆರು ಪುನರ್ ಅಭಿವೃದ್ಧಿಗೊಳಿಸಲಾದ ಆರು ರೈಲು ನಿಲ್ದಾಣಗಳನ್ನು ಉದ್ಘಾಟಿಸಲಿದ್ದಾರೆ.

ಭೇಟಿಯ ಭಾಗವಾಗಿ ಪ್ರಧಾನಿ, ಬಿಜೆಪಿ ಆಯೋಜಿಸಿರುವ ಸಾರ್ವಜನಿಕ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಲಿದ್ದು, ಇದರೊಂದಿಗೆ ಪಶ್ಚಿಮಬಂಗಾಳದಲ್ಲಿ ಮುಂಬರುವ ವಿಧಾನಸಭಾ ಚುನಾವಣೆಗೆ ಪ್ರಚಾರ ಕಾರ್ಯಕ್ಕೂ ಚಾಲನೆ ದೊರೆಯಲಿದೆ.

************

ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರು ಇಂದು ಹಿಮಾಚಲ ಪ್ರದೇಶಕ್ಕೆ ಭೇಟಿ ನೀಡಲಿದ್ದಾರೆ. ಕಾಂಗ್ರಾ ಜಿಲ್ಲೆಯ ಧರ್ಮಶಾಲಾದಲ್ಲಿ ಹಿಮಾಚಲ ಪ್ರದೇಶದ ಕೇಂದ್ರೀಯ ವಿಶ್ವವಿದ್ಯಾಲಯದ ೯ನೇ ಘಟಿಕೋತ್ಸವದಲ್ಲಿ ಅವರು ಭಾಗವಹಿಸಲಿದ್ದಾರೆ. ಭೇಟಿಯ ಸಮಯದಲ್ಲಿ ಉಪರಾಷ್ಟ್ರಪತಿ, ಧರ್ಮಶಾಲಾದ ಯುದ್ಧ ಸ್ಮಾರಕದಲ್ಲಿ ಗೌರವ ನಮನ ಸಲ್ಲಿಸಲಿದ್ದಾರೆ.

************

ಕಂದಾಯ ಸೇವಾ ಅಧಿಕಾರಿಗಳನ್ನು ದೇಶದ ಆರ್ಥಿಕ ವಲಯದ ಕಾವಲುಗಾರರು ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಬಣ್ಣಿಸಿದ್ದಾರೆ. ನವದೆಹಲಿಯಲ್ಲಿ ನಿನ್ನೆ ಭಾರತೀಯ ಕಂದಾಯ ಸೇವೆಯ ೭೯ನೇ ಬ್ಯಾಚ್‌ನ ಅಧಿಕಾರಿ ತರಬೇತಿದಾರರನ್ನು ಭೇಟಿ ಮಾಡಿದ ನಂತರ ಮಾತನಾಡಿದ ಅವರು, ದೇಶಾದ್ಯಂತ ಅಭಿವೃದ್ಧಿ ಚಟುವಟಿಕೆಗಳು ತೆರಿಗೆಗಳ ಮೂಲಕ ಉತ್ಪತ್ತಿಯಾಗುವ ಆದಾಯದಿಂದ ಮಾತ್ರ ಸಾಧ್ಯ. ತೆರಿಗೆ ವಂಚನೆಯನ್ನು ದೃಢವಾಗಿ ಪರಿಹರಿಸುವಾಗ ತೆರಿಗೆ ವ್ಯವಸ್ಥೆಯು ಪಾರದರ್ಶಕ, ನಿಷ್ಪಕ್ಷಪಾತ ಮತ್ತು ತೆರಿಗೆದಾರ ಸ್ನೇಹಿಯಾಗಿರಬೇಕು. ೨೦೪೭ರ ವೇಳೆಗೆ ಭಾರತವನ್ನು ವಿಕಸಿತ ಭಾರತ ಮಾಡುವ ಪಯಣದಲ್ಲಿ ಐಆರ್‌ಎಸ್ ಅಧಿಕಾರಿಗಳು ಭಾರತವನ್ನು ಪ್ರಮುಖ ಶಕ್ತಿಯನ್ನಾಗಿ ಮಾಡುವ ವಿಶೇಷ ಕೌಶಲ್ಯವನ್ನು ಹೊಂದಿದ್ದಾರೆ ಎಂದು ಉಪರಾಷ್ಟ್ರಪತಿ ತಿಳಿಸಿದ್ದಾರೆ.

************

ಖೇಲೋ ಇಂಡಿಯಾ ಯೋಜನೆಯಡಿ ಕರ್ನಾಟಕದ ಮಂಡ್ಯ ತಾಲೂಕಿನ ವಿ.ಸಿ.ಫಾರಂನಲ್ಲಿ ೧೪ ಕೋಟಿ ರೂಪಾಯಿ ವೆಚ್ಚದ ಸುಸಜ್ಜಿತ ಬಹುಪಯೋಗಿ ನೂತನ ಕ್ರೀಡಾಂಗಣ ಕಾಮಗಾರಿಗೆ ಇಂದು ಕೇಂದ್ರ ಯುವಜನ ಸೇವೆ ಹಾಗೂ ಕ್ರೀಡಾ ಸಚಿವ ಮನ್ಸುಖ್ ಮಾಂಡವೀಯ ಚಾಲನೆ ನೀಡಲಿದ್ದಾರೆ. ಬಳಿಕ ಅವರು, ಧಾರವಾಡದಲ್ಲಿ ನೂತನವಾಗಿ ನಿರ್ಮಾಣವಾಗಿರುವ ಕ್ರೀಡಾಸಂಕೀರ್ಣ ಮತ್ತು ಅಂತಾರಾಷ್ಟ್ರೀಯ ಮಟ್ಟದ ಈಜುಕೊಳವನ್ನು ಲೋಕಾರ್ಪಣೆಗೊಳಿಸಲಿದ್ದಾರೆ. ೫೦ ಕೋಟಿ ಅನುದಾನದಡಿ ಈ ಕ್ರೀಡಾಸಂಕೀರ್ಣ ಮತ್ತು ಈಜುಕೊಳವನ್ನು ನಿರ್ಮಿಸಲಾಗಿದೆ.

************

ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಪಂಜಾಬ್‌ನ ಮೋಗಾ ಜಿಲ್ಲೆಯಲ್ಲಿ ನಡೆಯಲಿರುವ ರ್‍ಯಾಲಿಯಲ್ಲಿ ಭಾಗಿಯಾಗಲಿದ್ದಾರೆ. 'ಬದ್ಲಾವ್ ರ್‍ಯಾಲಿ' ಎಂದು ಹೆಸರಿಸಲಾದ ಈ ರ್‍ಯಾಲಿ ಮುಂದಿನ ವರ್ಷದ ವಿಧಾನಸಭಾ ಚುನಾವಣೆಗೆ ಮುನ್ನ ಗಡಿ ರಾಜ್ಯ ಪಂಜಾಬ್‌ನಲ್ಲಿ ಬಿಜೆಪಿಯ ರಾಜಕೀಯ ಪ್ರಚಾರದ ಭಾಗವಾಗಿದೆ. ರ್‍ಯಾಲಿಯಲ್ಲಿ ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ರವನೀತ್ ಸಿಂಗ್ ಬಿಟ್ಟು ಮತ್ತು ಹಿರಿಯ ರಾಜ್ಯ ಬಿಜೆಪಿ ನಾಯಕರು ಭಾಗಿಯಾಗಲಿದ್ದಾರೆ.

************

ಯುವ ಸಂಗಮದ ಆರನೇ ಹಂತದ ನೋಂದಣಿಗಳು ಪ್ರಾರಂಭವಾಗಿದೆ. ಏಕ ಭಾರತ್ ಶ್ರೇಷ್ಠ ಭಾರತ್ ಪರಿಕಲ್ಪನೆ ಅಡಿಯಲ್ಲಿ ಈ ಉಪಕ್ರಮದಲ್ಲಿ ಭಾಗವಹಿಸಲು ಶಿಕ್ಷಣ ಸಚಿವಾಲಯ ದೇಶಾದ್ಯಂತ ಯುವಕರನ್ನು ಆಹ್ವಾನಿಸುತ್ತಿದೆ. ಈ ಉಪಕ್ರಮಕ್ಕೆ ನೋಂದಾಯಿಸಿಕೊಳ್ಳಲು ಇದೇ ೧೮ ಕೊನೆಯ ದಿನವಾಗಿದೆ. ebsb.aicte-india.org ಜಾಲತಾಣಕ್ಕೆ ಭೇಟಿ ನೀಡಿ, ನೋಂದಣಿ ಮಾಡಿಕೊಳ್ಳಬಹುದಾಗಿದೆ. ಈ ಕಾರ್ಯಕ್ರಮ ಯುವಕರಿಗೆ ವಿವಿಧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಭೇಟಿ ನೀಡಿ, ಭಾರತದ ಶ್ರೀಮಂತ ಸಾಂಸ್ಕೃತಿಕ ಪರಂಪರೆ, ಸಂಪ್ರದಾಯಗಳು ಮತ್ತು ನಾವೀನ್ಯತಾ ಪರಿಸರ ವ್ಯವಸ್ಥೆಗಳನ್ನು ಅನುಭವಿಸುವ ಅವಕಾಶ ಒದಗಿಸುತ್ತದೆ.

************

ಲೋಕಸಭೆಯಲ್ಲಿ ನಿನ್ನೆ ೨೦೨೫-೨೬ನೇ ಸಾಲಿನ ಎರಡನೇ ಹಂತದ ಪೂರಕ ಅನುದಾನಗಳ ಬೇಡಿಕೆಗಳನ್ನು ಅಂಗೀಕರಿಸಲಾಯಿತು. ಸರ್ಕಾರ ಒಟ್ಟು ೨ ಲಕ್ಷ ೮೧ ಸಾವಿರ ಕೋಟಿ ರೂಪಾಯಿಗಳಿಗೂ ಅಧಿಕ ಹೆಚ್ಚುವರಿ ವೆಚ್ಚಕ್ಕೆ ಅನುಮತಿ ಪಡೆದಿದ್ದು, ಈ ಮೊತ್ತವನ್ನು ಪ್ರಮುಖವಾಗಿ ರಕ್ಷಣಾ ಸೇವೆ, ರಸಗೊಬ್ಬರ ಮತ್ತು ಆಹಾರ ಸಬ್ಸಿಡಿಗಾಗಿ ಬಳಸಲಾಗುವುದು. ಚರ್ಚೆಗೆ ಉತ್ತರಿಸಿ ಮಾತನಾಡಿದ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಜಾಗತಿಕ, ಆರ್ಥಿಕ ಏರಿಳಿತಗಳನ್ನು ಎದುರಿಸಲು ಕೇಂದ್ರ ಸರ್ಕಾರ ಒಂದು ಲಕ್ಷ ಕೋಟಿ ರೂಪಾಯಿಗಳ ಆರ್ಥಿಕ ಸ್ಥಿರೀಕರಣ ನಿಧಿಯನ್ನು ಪ್ರಸ್ತಾಪಿಸಿದೆ ಎಂದು ತಿಳಿಸಿದರು. ಈ ಅನುದಾನದಲ್ಲಿ ರಕ್ಷಣಾ ವಲಯಕ್ಕೆ ೪೧ ಸಾವಿರದ ೪೩೦ ಕೋಟಿ ರೂಪಾಯಿ ನಿವೃತ್ತ ಸೈನಿಕರ ಆರೋಗ್ಯ ಯೋಜನೆಗೆ ೬ ಸಾವಿರದ ೧೪೦ ಕೋಟಿ ರೂಪಾಯಿ ಹಾಗೂ ರೈತರ ರಸಗೊಬ್ಬರ ಸಬ್ಸಿಡಿಗಾಗಿ ೧೯ ಸಾವಿರದ ೨೩೦ ಕೋಟಿ ರೂಪಾಯಿಗಳನ್ನು ಮೀಸಲಿಡಲಾಗಿದೆ. ಇದರ ಜೊತೆಗೆ ಸ್ಥಳೀಯ ಸಂಸ್ಥೆಗಳಿಗೆ ೩೭ ಸಾವಿರದ ೮೮೬ ಕೋಟಿ ರೂಪಾಯಿ ಹಾಗೂ ವಿಕಸಿತ ಭಾರತ ಯೋಜನೆಯ ಅನುಷ್ಠಾನಕ್ಕಾಗಿ ೩೦ ಸಾವಿರ ಕೋಟಿ ರೂಪಾಯಿ ಹಂಚಿಕೆ ಮಾಡಲಾಗಿದೆ.

************

ಭಾರತೀಯ ಚೆಸ್ ಇತಿಹಾಸದಲ್ಲಿ ಹೊಸ ದಾಖಲೆ ಬರೆಯಲಾಗಿದ್ದು, ಅಸ್ಸಾಂ ರಾಜ್ಯ ತನ್ನ ಮೊದಲ ಗ್ರ್ಯಾಂಡ್ ಮಾಸ್ಟರ್‌ಅನ್ನು ಪಡೆದಿದೆ. ೧೬ ವರ್ಷದ ಇಂಟರ್ ನ್ಯಾಷನಲ್ ಮಾಸ್ಟರ್ ಮಯಾಂಕ್ ಚಕ್ರವರ್ತಿ, ಸ್ವೀಡನ್‌ನಲ್ಲಿ ನಡೆದ ೮ನೇ ಗ್ರ್ಯಾಂಡ್‌ಮಾಸ್ಟರ್ ಟೂರ್ನಿಯಲ್ಲಿ ತಮ್ಮ ಅಂತಿಮ ಗ್ರ್ಯಾಂಡ್‌ಮಾಸ್ಟರ್ ನಾರ್ಮ್‌ಅನ್ನು ಪೂರೈಸುವ ಮೂಲಕ ಭಾರತದ ೯೪ನೇ ಗ್ರ್ಯಾಂಡ್‌ಮಾಸ್ಟರ್ ಆಗಿ ಹೊರಹೊಮ್ಮಿದ್ದಾರೆ. ಈ ಟೂರ್ನಿಯಲ್ಲಿ ಉತ್ತಮ ಪ್ರದರ್ಶನ ನೀಡಿದ ಮಯಾಂಕ್, ಒಟ್ಟು ೯ ಅಂಕಗಳಲ್ಲಿ ೭ ಅಂಕಗಳನ್ನು ಗಳಿಸಿ, ಅಗ್ರಸ್ಥಾನಪಡೆಯುವ ಜೊತೆಗೆ ಗ್ರ್ಯಾಂಡ್‌ಮಾಸ್ಟರ್ ಪದವಿಗೆ ಅಗತ್ಯವಾದ ಎರಡು ಸಾವಿರದ ೫೦೦ ಫಿಡೆ ಶ್ರೇಯಾಂಕವನ್ನು ದಾಟಿದ್ದಾರೆ.

************

ಹೈದರಾಬಾದ್‌ನಲ್ಲಿ ನಿನ್ನೆ ನಡೆದ ಎಫ್‌ಐಎಚ್ ಮಹಿಳಾ ಹಾಕಿ ವಿಶ್ವಕಪ್ ೨೦೨೬ರ ಅರ್ಹತಾ ಪಂದ್ಯಾವಳಿಯಲ್ಲಿ ಭಾರತ ತಂಡ, ಇಟಲಿ ತಂಡವನ್ನು ೧-೦ ಅಂತರದಲ್ಲಿ ಮಣಿಸಿ, ಫೈನಲ್‌ಗೆ ಲಗ್ಗೆ ಇಟ್ಟಿದೆ. ಭಾರತದ ಪರ ಮನೀಶಾ ಚೌಹಾಣ್ ೪೫ ನಿಮಿಷದಲ್ಲಿ ಗೆಲುವಿನ ಗೋಲು ದಾಖಲಿಸಿ, ತಂಡಕ್ಕೆ ಗೆಲುವು ತಂದುಕೊಟ್ಟರು. ಸಲೀಮಾ ಟೇಟೆ ನೇತೃತ್ವದ ಭಾರತದ ತಂಡ ಇಂದು ರಾತ್ರಿ ೭.೩೦ಕ್ಕೆ ನಡೆಯಲಿರುವ ಫೈನಲ್ ಪಂದ್ಯದಲ್ಲಿ ಇಂಗ್ಲೆಂಡ್ ತಂಡವನ್ನು ಎದುರಿಸಲಿದೆ.

************

ಪಶ್ಚಿಮ ಏಷ್ಯಾದ ಪ್ರಸ್ತುತ ಪರಿಸ್ಥಿತಿಯ ನಡುವೆ ಇಂಧನ ಮತ್ತು ಸರಕುಗಳ ತಡೆರಹಿತ ಸಾಗಾಣೆ ಮಹತ್ವವನ್ನು ಭಾರತ, ಇರಾನ್‌ಗೆ ಒತ್ತಿಹೇಳಿದೆ. ಪಶ್ಚಿಮ ಏಷ್ಯಾದಲ್ಲಿನ ಇತ್ತೀಚಿನ ಬೆಳವಣಿಗೆಗಳ ಕುರಿತು ಅಂತರ್ ಸಚಿವಾಲಯದ ಸುದ್ದಿಗೋಷ್ಠಿಯಲ್ಲಿ ಮಾಹಿತಿ ಹಂಚಿಕೊಂಡ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಪ್ರಧಾನಿ ನರೇಂದ್ರ ಮೋದಿ, ಇರಾನ್ ಅಧ್ಯಕ್ಷ ಡಾ. ಮಸೂದ್ ಪೆಸೆಶ್ ಕಿಯಾನ್ ಅವರೊಂದಿಗೆ ಮಾತುಕತೆ ನಡೆಸಿದ್ದು, ಇರಾನ್ ಸೇರಿದಂತೆ ಆ ಪ್ರದೇಶದಾದ್ಯಂತ ಇರುವ ಭಾರತೀಯ ನಾಗರಿಕರ ಸುರಕ್ಷತೆ ಮತ್ತು ಯೋಗಕ್ಷೇಮವೇ ತಮ್ಮ ಆದ್ಯತೆಯಾಗಿದೆ ಎಂದು ಸ್ಪಷ್ಟಪಡಿಸಿರುವುದಾಗಿ ತಿಳಿಸಿದ್ದಾರೆ.

******END******